**All India Radio: Bangalore**
**National Bulletin In Kannada**
**06.05.2026 19.35 p.m.**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**
**06.05.2026 19.35 p.m.**

---

ಮುಖ್ಯಾಂಶಗಳು

೧. ಡಿಜಿಟಲ್ ಪಾವತಿ, ಪ್ರವಾಸೋದ್ಯಮ ಹಾಗೂ ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳ ತಿಳಿವಳಿಕೆ ಒಪ್ಪಂದಗಳಿಗೆ ಸಹಿ ಹಾಕಿದ ಭಾರತ-ವಿಯೆಟ್ನಾಂ

೨. ತಮಿಳುನಾಡಿನಲ್ಲಿ ರಾಜ್ಯಪಾಲರ ಬಳಿ ಸರ್ಕಾರ ರಚಿಸಲು ಹಕ್ಕು ಮಂಡಿಸಿದ ಟಿವಿಕೆ ನಾಯಕ ವಿಜಯ್

೩. ಇದೇ ೯ ರಂದು ಪಶ್ಚಿಮ ಬಂಗಾಳದಲ್ಲಿ ನೂತನ ಬಿಜೆಪಿ ಸರ್ಕಾರದ ಪ್ರಮಾಣ ವಚನ ಸ್ವೀಕಾರ ಸಮಾರಂಭ; ಪ್ರಧಾನಿ ಸೇರಿದಂತೆ ಹಲವು ಗಣ್ಯರು ಭಾಗಿ

೪. ಐಪಿಎಲ್ ಟಿ-೨೦ ಕ್ರಿಕೆಟ್; ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ತಂಡ ಫೀಲ್ಡಿಂಗ್ ಆಯ್ಕೆ

---

ನವದೆಹಲಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಮತ್ತು ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ನಡುವಿನ ದ್ವಿಪಕ್ಷೀಯ ಸಂಬಂಧಗಳ ಮತ್ತು ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವ್ಯಾಪಕ ಚರ್ಚೆ ನಡೆಯಿತು.

ಈ ಮಾತುಕತೆಯ ನಂತರ, ಭಾರತ ಮತ್ತು ವಿಯೆಟ್ನಾಂ ನಡುವೆ ಇಂದು ಡಿಜಿಟಲ್ ತಂತ್ರಜ್ಞಾನ, ವೈದ್ಯಕೀಯ ಉತ್ಪನ್ನಗಳ ನಿಯಂತ್ರಣ, ಸಾರ್ವಜನಿಕ ವಲಯದ ಲೆಕ್ಕಪರಿಶೋಧನೆ, ಡಿಜಿಟಲ್

ಪಾವತಿ ವ್ಯವಸ್ಥೆ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಹಲವಾರು ತಿಳುವಳಿಕೆ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ವಿಯೆಟ್ನಾಂ ಅಧ್ಯಕ್ಷರಾಗಿ ಆಯ್ಕೆಯಾದ ಒಂದು ತಿಂಗಳೊಳಗೆ ಅಧ್ಯಕ್ಷ ಟೋ ಲಾಮ್ ಅವರು ಭೇಟಿ ನೀಡುತ್ತಿರುವ ಮೊದಲ ರಾಷ್ಟ ಭಾರತವಾಗಿದ್ದು, ಉಭಯ ದೇಶಗಳ ನಡುವಿನ ಸಂಬಂಧಗಳಿಗೆ ಅವರು ಎಷ್ಟು ಆದ್ಯತೆ ನೀಡುತ್ತಾರೆ ಎಂಬುದನ್ನು ಇದು ತೋರಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿಯೆಟ್ನಾಂನ ಪ್ರಾಚೀನ ಚಂಪಾ ನಾಗರಿಕತೆಯ ಮೈ ಸನ್ ಮತ್ತು ನ್ಹಾನ್ ಟೌ ದೇವಾಲಯಗಳನ್ನು ಭಾರತ ಪುನಃಸ್ಥಾಪಿಸುತ್ತಿದೆ. ಚಂಪಾ ನಾಗರಿಕತೆಯ ಹಸ್ತಪ್ರತಿಗಳನ್ನು ಭಾರತ ಡಿಜಿಟಲೀಕರಣಗೊಳಿಸುತ್ತದೆ ಮತ್ತು ಭವಿಷ್ಯದ ಪೀಳಿಗೆಗೆ ಈ ಅಮೂಲ್ಯ ಪರಂಪರೆಯನ್ನು ಸಂರಕ್ಷಿಸುತ್ತದೆ. ಎರಡೂ ದೇಶಗಳ ನಡುವಿನ ಪಾಲುದಾರಿಕೆಯಲ್ಲಿ, ಪರಂಪರೆ ಮತ್ತು ಅಭಿವೃದ್ಧಿ ಎರಡೂ ಮಹತ್ವದ ವಿಷಯಗಳಾಗಿವೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ಭಾರತದ ಕೃಷಿ, ಮೀನುಗಾರಿಕೆ ಮತ್ತು ಪ್ರಾಣಿ ಉತ್ಪನ್ನಗಳು ವಿಯೆಟ್ನಾಂಗೆ ಸುಗಮವಾಗಿ ರಫ್ತಾಗುತ್ತಿದ್ದು, ಆರ್ಥಿಕತೆಯನ್ನು ಅಭಿವೃದ್ಧಿಪಡಿಸಲು ಇಂದು ಎರಡೂ ದೇಶಗಳು ಕೇಂದ್ರ ಬ್ಯಾಂಕುಗಳ ನಡುವಿನ ಸಹಕಾರ ಹೆಚ್ಚಿಸಲು ನಿರ್ಧರಿಸಲಾಗಿದೆ ಎಂದು ಅವರು ಹೇಳಿದರು.

ಭಾರತದ ಯುಪಿಐ ಮತ್ತು ವಿಯೆಟ್ನಾಂನ ತ್ವರಿತ ಪಾವತಿ ವ್ಯವಸ್ಥೆಯನ್ನು ಶೀಘ್ರದಲ್ಲೇ ಒಂದುಗೂಡಿಸಲಾಗುವುದು. ವಿಯೆಟ್ನಾಂ ಭಾರತದ ಆಕ್ಟ್ ಈಸ್ಟ್ ಯೋಜನೆ ಮತ್ತು ವಿಷನ್ ಓಷನ್‌ನ ಪ್ರಮುಖ ಆಧಾರಸ್ತಂಭವಾಗಿದೆ ಎಂದು ಅವರು ಶ್ಲಾಘಿಸಿದರು.

ರಕ್ಷಣಾ ಮತ್ತು ಭದ್ರತಾ ಸಹಕಾರವನ್ನು ಬಲಪಡಿಸುವ ಮೂಲಕ, ಉಭಯ ದೇಶದವರು ಕಾನೂನು-ನಿಯಮ, ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಕೊಡುಗೆ ನೀಡುವುದನ್ನು ಮುಂದುವರಿಸುತ್ತವೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಬಲವಾಗಿ ಖಂಡಿಸಿದ್ದಕ್ಕಾಗಿ ಮತ್ತು ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ನೀಡಿದ ಸಹಕಾರಕ್ಕಾಗಿ ಭಾರತವು ವಿಯೆಟ್ನಾಂಗೆ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತದೆ ಎಂದು ಪ್ರಧಾನಿ ತಿಳಿಸಿದರು.

---

ವಿಯೆಟ್ನಾಂ ಅಧ್ಯಕ್ಷ ಟೋ ಲಾಮ್ ಅವರ ಭೇಟಿಯು ಭಾರತ ಮತ್ತು ವಿಯೆಟ್ನಾಂ ನಡುವಿನ ಬಲವಾದ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಶಾಶ್ವತ ಸ್ನೇಹವನ್ನು ಪ್ರತಿಬಿಂಬಿಸುತ್ತದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅಭಿಪ್ರಾಯ ಪಟ್ಟಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆಯೋಜಿಸಿದ್ದ ಔಪಚಾರಿಕ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಿದ ಸಚಿವರು, ಈ ಭೇಟಿಯು ಎರಡೂ ರಾಷ್ಟ್ರಗಳ ನಡುವೆ ಬೆಳೆಯುತ್ತಿರುವ ಸಂಬಂಧಗಳನ್ನು ಒತ್ತಿ ಹೇಳುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

---

ತಮಿಳುನಾಡಿನಲ್ಲಿ ಟಿವಿಕೆ ಮುಖ್ಯಸ್ಥ ಜೋಸೆಫ್ ವಿಜಯ್, ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರೊಂದಿಗೆ ನಡೆಸಿದ ಸಭೆಯಲ್ಲಿ, ಮುಂದಿನ ಸರ್ಕಾರ ರಚಿಸಲು ಹಕ್ಕು ಮಂಡಿಸಿದ್ದಾರೆ.

ಪಕ್ಷದ ಹಿರಿಯ ನಾಯಕರಾದ ಕೆ.ಎ. ಸೆಂಗೋಟ್ಟೈಯನ್, ಎನ್.ಆನಂದ್, ಸಿಟಿಆರ್. ನಿರ್ಮಲ್ ಕುಮಾರ್ ಹಾಗೂ ಇತರರೊಂದಿಗೆ ರಾಜ್ಯಪಾಲರನ್ನು ಅವರು ಭೇಟಿಯಾದರು. ಟಿವಿಕೆ ೧೦೮ ಸ್ಥಾನಗಳನ್ನು ಗೆದ್ದಿದೆ. ತನ್ನ ಬಹುಮತವನ್ನು ಸಾಬೀತುಪಡಿಸಲು ಇನ್ನೂ ೧೦ ಸ್ಥಾನಗಳು ಅವಶ್ಯವಾಗಿವೆ. ಇದಕ್ಕೆ ರಾಜ್ಯಪಾಲರ ಬಳಿ ಎರಡು ವಾರಗಳ ಕಾಲಾವಕಾಶವನ್ನು ಪಕ್ಷವು ಕೋರಿದೆ.

ಇಂದು ಮುಂಜಾನೆ, ಕಾಂಗ್ರೆಸ್ ನಾಯಕ ಗಿರೀಶ್ ಚೋಡಂಕರ್ ಮತ್ತು ಪಕ್ಷದ ಇತರ ನಾಯಕರು ಟಿವಿಕೆ ಮುಖ್ಯಸ್ಥರನ್ನು ಭೇಟಿ ಮಾಡಿ ಐದು ಶಾಸಕರ ಬೆಂಬಲವನ್ನು ಸೂಚಿಸಿದರು.

ಮತ್ತೊಂದು ಬೆಳವಣಿಗೆಯಲ್ಲಿ, ವಿಸಿಕೆ ಮುಖ್ಯಸ್ಥ ಥೋಲ್. ತಿರುಮಾವಲವನ್ ಅವರು ತಮ್ಮ ಮೈತ್ರಿಕೂಟಕ್ಕೆ ಸೇರಲು ಟಿವಿಕೆ ನೀಡಿದ ಆಹ್ವಾನದ ಬಗ್ಗೆ ತಮ್ಮ ಪಕ್ಷ ನಿರ್ಧಾರ ತೆಗೆದುಕೊಳ್ಳಲಿದೆ

ಎಂದು ಹೇಳಿದ್ದಾರೆ. ಪ್ರಸ್ತುತ, ವಿಸಿಕೆ ಡಿಎಂಕೆ ಜೊತೆ ಮೈತ್ರಿ ಮಾಡಿಕೊಂಡಿದೆ. ಪಕ್ಷವು ಇಬ್ಬರು ಶಾಸಕರನ್ನು ಹೊಂದಿದೆ.

ರಾಜ್ಯಪಾಲರು, ಒಂದು ಅಥವಾ ಎರಡು ದಿನಗಳಲ್ಲಿ ಏಕೈಕ ಅತಿದೊಡ್ಡ ಪಕ್ಷವಾದ ಟಿವಿಕೆಯನ್ನು ಸರ್ಕಾರ ರಚಿಸಲು ಕರೆಯುವ ಅಂತಿಮ ನಿರ್ಧಾರ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.

ಇನ್ನೊಂದು ಬೆಳವಣಿಗೆಯಲ್ಲಿ, ಎಐಎಡಿಎಂಕೆಯ ಚುನಾಯಿತ ಶಾಸಕರ ಒಂದು ಭಾಗವು ಪಕ್ಷದ ನಾಯಕತ್ವವು ಟಿವಿಕೆಯನ್ನು ಬೆಂಬಲಿಸಬೇಕೆಂದು ಬಯಸುತ್ತದೆ.

---

ದೇಶದಲ್ಲಿ ಅಡುಗೆ ಅನಿಲ ಹಾಗೂ ಪೆಟ್ರೋಲ್, ಡೀಸೆಲ್ ಪೂರೈಕೆ ಸುಗಮವಾಗಿ ನಡೆಯುತ್ತಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ದೆಹಲಿಯಲ್ಲಿಂದು ಅಂತರ್ ಸಚಿವಾಲಯ ಸುದ್ದಿಗೋಷ್ಠಿಯಲ್ಲಿ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತ ಶರ್ಮಾ, ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟನಿಂದ ಪೆಟ್ರೋಲಿಯಂ ಉತ್ಪನ್ನಗಳ ಆಮದಿಗೆ ಅಡಚಣೆಯಾಗಿತ್ತು. ಆದರೂ ಸರ್ಕಾರ ಶೇಕಡ ೧೦೦ರಷ್ಟು ಪ್ರಮಾಣದಲ್ಲಿ ಗ್ರಾಹಕರಿಗೆ ಗೃಹ ಬಳಕೆ ಅಡುಗೆ ಅನಿಲ ಪೂರೈಸಲು ಎಲ್ಲಾ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ. ವಾಣಿಜ್ಯ ಬಳಕೆ ಅನಿಲ ಸಿಲೆಂಡರ್‌ಗಳ ಪೂರೈಕೆಯು ಶೇಕಡಾ ೭೦ ರಷ್ಟಿದೆ ಎಂದು ಮಾಹಿತಿ ನೀಡಿದರು.

ವಾಣಿಜ್ಯ ಅಡುಗೆ ಅನಿಲ ದರ ಏರಿಕೆಯಾಗಿದ್ದು, ಗೃಹ ಬಳಕೆ ಅಡುಗೆ ಅನಿಲ, ಪೆಟ್ರೋಲ್, ಡೀಸೆಲ್ ದರ ಏರಿಕೆಯಾಗಿಲ್ಲ. ೫ ಕೆಜಿ ಎಲ್‌ಪಿಜಿ ಸಿಲೆಂಡರ್ ಗಳು ಹೆಚ್ಚಿನ ಪ್ರಮಾಣದಲ್ಲಿ ಮಾರಾಟವಾಗುತ್ತಿವೆ, ಹೊಸ ಪೈಪ್ ಮೂಲಕ ನೈಸರ್ಗಿಕ ಅನಿಲ ಪೂರೈಕೆ ಸಂಪರ್ಕಗಳನ್ನು ಒದಗಿಸಲಾಗುತ್ತಿದೆ. ದೇಶದಲ್ಲಿ ಕಚ್ಚಾ ತೈಲ ಶುದ್ಧೀಕರಣ ಘಟಕಗಳು ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದರು.

---

ಪಶ್ಚಿಮ ಬಂಗಾಳದ ನೂತನ ಬಿಜೆಪಿ ಸರ್ಕಾರದ ಪ್ರಮಾಣ ವಚನ ಸ್ವೀಕಾರ ಸಮಾರಂಭವು ಇದೇ ೯ ರಂದು ಬ್ರಿಗೇಡ್ ಪರೇಡ್ ಮೈದಾನದಲ್ಲಿ ನಡೆಯಲಿದೆ. ಈ ಸಮಾರಂಭವು ಬೆಳಿಗ್ಗೆ ೧೦ ಗಂಟೆಯಿಂದ ಆರಂಭವಾಗಲಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಪಕ್ಷದ ಮೂಲಗಳ ಪ್ರಕಾರ, ಈ ಕಾರ್ಯಕ್ರಮದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ಆಡಳಿತವಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ನಿರೀಕ್ಷೆಯಿದೆ. ಇದು ಅತ್ಯಂತ ಮಹತ್ವದ ರಾಜಕೀಯ ಸಮಾವೇಶವಾಗಿ ಹೊರಹೊಮ್ಮಲಿದೆ.

ಬ್ರಿಗೇಡ್ ಪರೇಡ್ ಮೈದಾನವು ಐತಿಹಾಸಿಕವಾಗಿ ಬಂಗಾಳದ ಪ್ರಮುಖ ರಾಜಕೀಯ ರ್‍ಯಾಲಿಗಳು ಮತ್ತು ಜನಬೆಂಬಲ ಪ್ರದರ್ಶನದ ತಾಣವಾಗಿರುವುದರಿಂದ, ಸಮಾರಂಭಕ್ಕಾಗಿ ಈ ಸ್ಥಳವನ್ನು ಆಯ್ಕೆ ಮಾಡಿರುವುದು ಸಾಂಕೇತಿಕವಾಗಿದೆ. ರಾಷ್ಟ್ರೀಯ ಮಟ್ಟದ ಅಗ್ರ ನಾಯಕರ ಉಪಸ್ಥಿತಿಯು, ಈ ಆಡಳಿತ ಬದಲಾವಣೆಗೆ ಬಿಜೆಪಿ ನೀಡುತ್ತಿರುವ ಹೆಚ್ಚಿನ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ.

---

ನವದೆಹಲಿಯಲ್ಲಿ ಇಂದು ಜಪಾನ್‌ನ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವೆ ಓನೋಡಾ ಕಿಮಿ, ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಉಪಕರಣಗಳ ಕ್ಷೇತ್ರ ಸೇರಿದಂತೆ ವಿವಿಧ ವಿಷಯಗಳಲ್ಲಿ ಪರಸ್ಪರ ಸಹಕಾರದ ಬಗ್ಗೆ ಚರ್ಚಿಸಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಡಾ. ಜಿತೇಂದ್ರ ಸಿಂಗ್, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಮತ್ತು ಜಪಾನ್ ನಡುವೆ ನೈಸರ್ಗಿಕ ಸಮನ್ವಯತೆ ಇದ್ದು, ಉಭಯ ದೇಶಗಳು ಜಂಟಿಯಾಗಿ ಮುಂಚೂಣಿಯ ಕ್ಷೇತ್ರಗಳಲ್ಲಿ ನಾವೀನ್ಯತೆಯನ್ನು ವೇಗಗೊಳಿಸಬಹುದು ಮತ್ತು ಸಂಶೋಧನೆಗಳನ್ನು ಸಮಾಜಕ್ಕೆ ಪ್ರಯೋಜನಕಾರಿ ಫಲಿತಾಂಶಗಳಾಗಿ ಪರಿವರ್ತಿಸಬಹುದು ಎಂದು ಅವರು ಅಭಿಪ್ರಾಯಪಟ್ಟರು.

ಕ್ವಾಂಟಮ್ ತಂತ್ರಜ್ಞಾನಗಳು, ಸೈಬರ್-ಭೌತಿಕ ವ್ಯವಸ್ಥೆಗಳು, ವಿದ್ಯುತ್ ಚಲನಶೀಲತೆ, ಶುದ್ಧ ಇಂಧನ ಮತ್ತು ಸುಧಾರಿತ ಕಂಪ್ಯೂಟಿಂಗ್‌ನಲ್ಲಿ ಕ್ಷೇತ್ರಗಳಿಗೆ ಭಾರತ ಹೆಚ್ಚಿನ ಒತ್ತು ನೀಡುತ್ತಿದ್ದು, ಜಂಟಿ ಸಂಶೋಧನೆ ಮತ್ತು ಕೈಗಾರಿಕಾ ಪಾಲುದಾರಿಕೆಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವೆ ಓನೋಡಾ ಕಿಮಿ, ಕ್ಷಿಪ್ರ ಆರ್ಥಿಕ ಬೆಳವಣಿಗೆ ಮತ್ತು ನಾವೀನ್ಯತೆಯತ್ತ ಭಾರತಕ್ಕಿರುವ ಬದ್ಧತೆಯನ್ನು ಶ್ಲಾಘಿಸಿದರು. ಈ ಸಭೆಯಲ್ಲಿ ವಿನಿಮಯ ಮಾಡಿಕೊಂಡ ಒಪ್ಪಂದಗಳು ಸಂಶೋಧನೆ ಮತ್ತು ಅನ್ವಯಿಕ ಕ್ಷೇತ್ರಗಳಲ್ಲಿ ಗಾಢವಾದ ಸಹಕಾರಕ್ಕೆ ದಾರಿ ಮಾಡಿಕೊಡಲಿವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

---

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಪಂಜಾಬ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

---

ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ಗೆ ೧೦ ವಕೀಲರನ್ನು ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಯನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಅನುಮೋದಿಸಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಕೊಲಿಜಿಯಂ ಇದೇ ಸೋಮವಾರ ನಡೆದ ಸಭೆಯಲ್ಲಿ ವಕೀಲರಾದ ಮೋನಿಕಾ ಛಿಬ್ಬರ್ ಶರ್ಮಾ, ಹರ್ಮೀತ್ ಸಿಂಗ್ ಡಿಯೋಲ್, ಪೂಜಾ ಚೋಪ್ರಾ, ಸುನೀಶ್ ಬಿಂದ್ಲಿಷ್, ನವದೀಪ್ ಸಿಂಗ್, ದಿವ್ಯಾ ಶರ್ಮಾ, ರವೀಂದ್ರ ಮಲಿಕ್, ಪ್ರವೀಂದ್ರ ಸಿಂಗ್ ಚೌಹಾಣ್, ರಾಜೇಶ್ ಗೌರ್ ಮತ್ತು ಮಿಂದರ್‌ಜೀತ್ ಯಾದವ್ ಅವರನ್ನು ನ್ಯಾಯಾಧೀಶರನ್ನಾಗಿ ಅನುಮೋದಿಸಿದೆ.

ಮತ್ತೊಂದು ನಿರ್ಧಾರದಲ್ಲಿ, ಆಂಧ್ರಪ್ರದೇಶ ಹೈಕೋರ್ಟ್‌ಗೆ ಮೂವರು ನ್ಯಾಯಾಂಗ ಅಧಿಕಾರಿಗಳನ್ನು ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಯನ್ನು ಕೊಲಿಜಿಯಂ ಅನುಮೋದಿಸಿದೆ. ಸುನೀತಾ ಗಂಧಮ್, ಅಲಪತಿ ಗಿರಿಧರ್ ಮತ್ತು ಪುರುಷೋತ್ತಮ್ ಕುಮಾರ್ ಚೆಂತಲಪುಡಿ ನಿರ್ದೇಶಿತ ಅಧಿಕಾರಿಗಳಾಗಿದ್ದಾರೆ.

______________________

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರು ನಾಳೆ, ೪೦ ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಕಾರ್ಮಿಕರಿಗಾಗಿ ರಾಷ್ಟ್ರವ್ಯಾಪಿ ’ವಾರ್ಷಿಕ ಆರೋಗ್ಯ ತಪಾಸಣಾ ಉಪಕ್ರಮ’ಕ್ಕೆ ನವದೆಹಲಿಯ ಇಎಸ್‌ಐಸಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಚಾಲನೆ ನೀಡಲಿದ್ದಾರೆ.

__________ ಮುಕ್ತಾಯ ___________